**843 ಶ್ರೀ ಖಾದರ್ ಯು.ಟಿ.** : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಈ ವರ್ಷ ವೃತ್ತಿಪರ ಕೋರ್ಸಿನ ಸಿ.ಇ.ಟಿ. (C.E.T) ಕೇಂದ್ರವನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ;

ಆ) ಸಿ.ಇ.ಟಿ. (C.E.T) ಕೇಂದ್ರವನ್ನು ಮಂಗಳೂರಿನಲ್ಲಿ ಪ್ರಾರಂಭಿಸುವುದರಿಂದ ಈ ವಿದ್ಯಾರ್ಥಿಗಳಿಗೆ ಅನುಕೂಲವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸಿ.ಇ.ಟಿ. (C.E.T) ಕೇಂದ್ರ ತೆರೆಯಲು ಯಾವ ಕ್ರಮ ಕೈಗೊಳ್ಳಲಾಗುವುದು?

**ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು)** :

ಅ) ಹೌದು. ಆನ್‌ಲೈನ್ ಸೀಟು ಹಂಚಿಕೆ ಕೇಂದ್ರ ಸ್ಥಾಪಿಸಲಾಗುತ್ತದೆ.

ಆ) ಹೌದು

ಇ) ಮಂಗಳೂರಿನಲ್ಲಿ ಸಿಇಟಿ 2010ರ ಆನ್‌ಲೈನ್ ಸೀಟು ಹಂಚಿಕೆ ಕೇಂದ್ರ ಸ್ಥಾಪಿಸುವ ಬಗ್ಗೆ ಕಟ್ಟಡದ ಆಯ್ಕೆಗೆ ಪರಿಶೀಲನೆ ನಡೆಸಿದ್ದು, ಈ ಬಗ್ಗೆ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗುವುದು.

**842 ಶ್ರೀ ಅಭಯಚಂದ್ರ ಜೈನ್ ಕೆ. (ಮೂಡಬಿದ್ರೆ)** : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೊಲ್ಕಿ–ಮೂಡುಬಿದ್ರೆ ವಿಧಾನಸಭಾ ಕ್ಷೇತ್ರದಲ್ಲಿ ಸರ್ಕಾರ ಹೊಸದಾಗಿ ಪ್ರಾರಂಭಿಸಿರುವ ಪ್ರೌಢಶಾಲೆಗಳಲ್ಲಿ ಇದುವರೆವಿಗೂ ಶಿಕ್ಷಕರು/ಶಿಕ್ಷಕೇತರರನ್ನು ನೇಮಕ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದರಿಂದ ಗ್ರಾಮೀಣ ಮಟ್ಟದ ವಿದ್ಯಾರ್ಥಿಗಳಿಗೆ ವ್ಯಾಸಂಗಕ್ಕೆ ತೊಂದರೆಯಾಗುತ್ತಿಲ್ಲವೇ;

ಇ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡಲು ಸರ್ಕಾರವು ಕ್ರಮ ಕೈಗೊಳ್ಳಲಾಗುವುದೇ?

**ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :**

ಅ) ಹೌದು

ಆ)

- ಸರ್ಕಾರಿ ಪ್ರೌಢಶಾಲೆ ಪಡುಕೋಣಜಿ ಇಲ್ಲಿ ಒಬ್ಬ ಟಿ.ಜಿ.ಟಿ ಶಿಕ್ಷಕರು ಸೇವೆ ಸಲ್ಲಿಸುತ್ತಿದ್ದು ಇವರ ಜೊತೆಗೆ ಇನ್ನೊಬ್ಬ ಅರ್ಹ ಶಿಕ್ಷಕರನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಧಕ್ಕೆಯಾಗದಂತೆ ನಿಯೋಜಿಸಿದೆ.
- ಸರ್ಕಾರಿ ಪ್ರೌಢಶಾಲೆ ಮುಚ್ಚೂರು ಈ ಶಾಲೆಗೆ ಅರ್ಹ ವಿದ್ಯಾರ್ಹತೆ ಹೊಂದಿರುವ ಇಬ್ಬರು ಶಿಕ್ಷಕರನ್ನು ನಿಯೋಜಿಸಿದೆ.

ಇ) ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ: 18.05.2009ರಂದು ಅಧಿಸೂಚನೆ ಹೊರಡಿಸಿ, ದಿನಾಂಕ: 05.12.2009 ರಂದು ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಸದ್ಯದಲ್ಲಿಯೇ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

**620 ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) :** ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಹುಳಿಯಾರು ಹೋಬಳಿ ದಸೋಡಿ ಗ್ರಾಮದಲ್ಲಿ ಮತ್ತು ಕಂದೀಕೆರೆ ಹೋಬಳಿ ಕಾತ್ರಿಕೇಹಾಳ್ ಗ್ರಾಮದಲ್ಲಿ ಉಪ ವಿದ್ಯುತ್ ಸ್ಥಾವರದ ಕಾಮಗಾರಿಗಳು ಪ್ರಾರಂಭವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಕಾಮಗಾರಿಗಳು ಪ್ರಾರಂಭವಾಗಲು ವಿಳಂಬವಾಗುತ್ತಿರುವುದಕ್ಕೆ ಸೂಕ್ತ ಕಾರಣಗಳೇನು;

ಇ) ಸಮಸ್ಯೆಗಳಿದ್ದಲ್ಲಿ, ಪರಿಹರಿಸಲು ಸರ್ಕಾರ ಏನು ಕ್ರಮ ತೆಗೆದುಕೊಂಡಿರುತ್ತದೆ?

**ಶ್ರೀ ಕೆ.ಎಸ್. ಈಶ್ವರಪ್ಪ (ಇಂಧನ ಸಚಿವರು) :**

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ದಸೂಡಿ ಗ್ರಾಮದಲ್ಲಿ 66 ಕೆ.ವಿ. ವಿದ್ಯುತ್ ಉಪ ಕೇಂದ್ರದ ಕಾಮಗಾರಿಗಳು ಪ್ರಗತಿಯಲ್ಲಿವೆ.